RNU AIR DHARWAD

# OCTOBER 22, 2025
# ALL INDIA RADIO- DHARWAD
# PRADESH SAMACHARA (KANNADA) 7:05 AM

- **ಪೊಲೀಸ್ ಇಲಾಖೆ ಪರಿಶ್ರಮದಿಂದ** ಅನೈತಿಕ ಪೊಲೀಸ್‌ಗಿರಿಗೆ ರಾಜ್ಯದಲ್ಲಿ ಕಡಿವಾಣ–ಮುಖ್ಯಮಂತ್ರಿ ಮೆಚ್ಚುಗೆ.

- **ಸಾಮೂಹಿಕ ವಿವಾಹ:** ಮಕ್ಕಳ ರಕ್ಷಣಾ ಘಟಕದಿಂದ ನಿರಪೇಕ್ಷಣಾ ಪತ್ರ ಕಡ್ಡಾಯ– ಕಾನೂನು ಸಚಿವರು.

- **ನಾಳೆಯಿಂದ ಆರಂಭವಾಗಲಿರುವ** ಮೂರು ದಿನಗಳ ಕಿತ್ತೂರು ಉತ್ಸವಕ್ಕೆ ಸಕಲ ಸಿದ್ಧತೆ: ಸ್ಥಳೀಯ, ಇತರೆ ಜಿಲ್ಲೆಗಳ ಕಲಾವಿದರು ಭಾಗಿ.

- **ರಾಜ್ಯಾದ್ಯಂತ ಪೊಲೀಸ್** ಸಂಸ್ಮರಣಾ ದಿನ ಆಚರಣೆ: ಹುತಾತ್ಮ ಪೊಲೀಸರಿಗೆ ಗೌರವ ನಮನ.

**ಈಗ ವಾರ್ತೆಗಳ ವಿವರ**

*******

**ರಾಜ್ಯದ ಘನತೆ, ಅಭಿವೃದ್ಧಿ** ಮತ್ತು ಪ್ರಗತಿಗೆ ಕಂಟಕವಾಗಿದ್ದ ಸಂವಿಧಾನ ವಿರೋಧಿ ಅನೈತಿಕ ಪೊಲೀಸ್‌ಗಿರಿಗೆ ರಾಜ್ಯದಲ್ಲಿ ಕಡಿವಾಣ ಬಿದ್ದಿದೆ. ಇದರ ಶ್ರೇಯಸ್ಸು ಪೊಲೀಸ್ ಇಲಾಖೆಗೆ ಸಲ್ಲಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ ಆಯೋಜನೆಗೊಂಡಿದ್ದ ಪೊಲೀಸ್ ಸಂಸ್ಮರಣಾ ದಿನಾಚರಣೆಯಲ್ಲಿ ಹುತಾತ್ಮ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗೆ ಗೌರವ ನಮನ ಸಲ್ಲಿಸಿ, ಮಾತನಾಡಿದ ಅವರು, ಪೊಲೀಸ್ ಇಲಾಖೆ ಶಾಂತಿ–ಸುವ್ಯವಸ್ಥೆ ಕಾಪಾಡಿದರೆ ರಾಜ್ಯದ ಅಭಿವೃದ್ಧಿ ಸಾಧ್ಯವಾಗುತ್ತದೆ. ಒಂದು ವರ್ಷದಲ್ಲಿ ರಾಜ್ಯದ 8 ಮಂದಿ ಸೇರಿ ದೇಶದಲ್ಲಿ 191 ಮಂದಿ ಕರ್ತವ್ಯ ನಿರ್ವಹಣೆ ವೇಳೆ ಪ್ರಾಣ ತ್ಯಾಗ ಮಾಡಿ, ಹುತಾತ್ಮರಾಗಿದ್ದಾರೆ. ಇವರ ತ್ಯಾಗ, ಬಲಿದಾನಕ್ಕೆ ಬೆಲೆ ಕಟ್ಟಲಾಗದು. ಇವರನ್ನು ಇಡೀ ದೇಶ ಸ್ಮರಿಸಿ, ವಂದಿಸುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಮುಖ್ಯಮಂತ್ರಿ ಹೇಳಿದರು.

*******

**ರಾಜ್ಯದ ಹೈನುಗಾರಿಕೆ ಸಹಕಾರಿ** ಚಳುವಳಿ ಬಲಪಡಿಸುವಲ್ಲಿ ಕರ್ನಾಟಕ ಹಾಲು ಮಹಾಮಂಡಳಿ–ಕೆಎಂಎಫ್ ಮುಂಚೂಣಿಯಲ್ಲಿದೆ ಎಂದು ಪಶುಸಂಗೋಪನಾ ಇಲಾಖೆ ಸಚಿವ ಕೆ.ವೆಂಕಟೇಶ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಐದು ದಶಕಗಳಿಂದ ರಾಜ್ಯದ ಹೈನುಗಾರಿಕೆ ಮತ್ತು ಸಹಕಾರ ಕ್ಷೇತ್ರದಲ್ಲಿ ಕೆಎಂಎಫ್ ಪ್ರಮುಖ ಸ್ಥಾನ ಹೊಂದಿದ್ದು, ಹಾಲು ಉತ್ಪಾದಕ ರೈತರ ಹಿತದೃಷ್ಟಿಯಿಂದ ಹಲವು ಯೋಜನೆಗಳನ್ನು ರೂಪಿಸಿ, ಅನುಷ್ಠಾನಗೊಳಿಸುತ್ತಿದೆ ಎಂದರು. ಪ್ರತಿದಿನ ರಾಜ್ಯದ ವಿವಿಧ ಹೈನುಗಾರ ರೈತರಿಂದ ಸರಾಸರಿ 1 ಕೋಟಿ ಲೀಟರ್ ಹಾಲು ಸಂಗ್ರಹಿಸಲಾಗುತ್ತಿದ್ದು, ಅದರಲ್ಲಿ ಸುಮಾರು 65 ಲಕ್ಷ ಲೀಟರ್ ಹಾಲು, ಮೊಸರು ಹಾಗೂ ಯುಎಚ್ ಹಾಲು ಉತ್ಪನ್ನಗಳನ್ನು ರಾಜ್ಯ ಮತ್ತು ಹೊರ ರಾಜ್ಯಗಳ ಗ್ರಾಹಕರಿಗೆ ತಲುಪಿಸಲಾಗುತ್ತಿದೆ ಎಂದು ಸಚಿವರು ಹೇಳಿದರು.

*******

**ಸಾಮೂಹಿಕ ವಿವಾಹಗಳಲ್ಲಿ** ನಡೆಯುವ ಬಾಲ್ಯವಿವಾಹ ತಡೆಗಟ್ಟಲು ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಕಾನೂನು ಸಚಿವ ಎಚ್ .ಕೆ. ಪಾಟೀಲ ಸೂಚಿಸಿದ್ದಾರೆ. ಗದಗನಲ್ಲಿ ನಿನ್ನೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಬಾಲ ನ್ಯಾಯ ಮಂಡಳಿ ಮತ್ತು ಮಕ್ಕಳ ಕಲ್ಯಾಣ ಸಮಿತಿ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು ಮತ್ತು ಸಿಬ್ಬಂದಿ, ಸಾಮೂಹಿಕ ವಿವಾಹಗಳು ನಡೆಯುವ ಕಡೆ ಒಂದು ದಿನ ಮುಂಚಿತವಾಗಿಯೇ ಹೋಗಬೇಕು. ಪೊಲೀಸರ ನೆರವು ಪಡೆದು ವಿಡಿಯೋ ಚಿತ್ರೀಕರಣದ ಮೂಲಕ ಪರಿಶೀಲನೆ ನಡೆಸಿ, ಬಾಲ್ಯವಿವಾಹ ನಡೆಯದಂತೆ ನೋಡಿಕೊಳ್ಳಬೇಕು ಎಂದರು. ಮುಂದಿನ ದಿನಗಳಲ್ಲಿ ಸಾಮೂಹಿಕ ವಿವಾಹ ನಡೆಸುವ ಸಂಘ ಸಂಸ್ಥೆಗಳು,

ಆಯೋಜಕರು ಕಡ್ಡಾಯವಾಗಿ ಮಕ್ಕಳ ರಕ್ಷಣಾ ಘಟಕದಿಂದ ನಿರಪೇಕ್ಷಣಾ ಪತ್ರ ಪಡೆದುಕೊಳ್ಳಬೇಕು. ಈ ನಿಟ್ಟಿನಲ್ಲಿ ಜಿಲ್ಲಾಡಳಿತ ಸೂಕ್ತ ಮಾರ್ಗಸೂಚಿ ಪ್ರಕಟಿಸಲಿದ್ದು, ಅಧಿಕಾರಿಗಳು ಅದನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚನೆ ನೀಡಲಾಗಿದೆ ಎಂದು ಸಚಿವರು ಹೇಳಿದರು.

*******

**ನಾಳೆಯಿಂದ ಆರಂಭವಾಗಲಿರುವ** ಮೂರು ದಿನಗಳ ಕಿತ್ತೂರು ಉತ್ಸವಕ್ಕೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ ರೋಷನ್ ತಿಳಿಸಿದ್ದಾರೆ. ಕಿತ್ತೂರಿನಲ್ಲಿ ಉತ್ಸವದ ಪೂರ್ವಸಿದ್ಧತೆಯ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉತ್ಸವದಲ್ಲಿ ರಾಜ್ಯಮಟ್ಟದ ಪ್ರಸಿದ್ಧ ಕಲಾವಿದರು ಸೇರಿದಂತೆ ಸ್ಥಳೀಯ ಹಾಗೂ ರಾಜ್ಯದ ಇತರ ಜಿಲ್ಲೆಗಳ ಕಲಾವಿದರು ಭಾಗವಹಿಸಲಿದ್ದಾರೆ ಎಂದರು. ವಿವಿಧ ಬಗೆಯ ಕ್ರೀಡೆ ಹಾಗೂ ವಿಚಾರ ಸಂಕಿರಣ, ಉಪನ್ಯಾಸ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ಉತ್ಸವಕ್ಕೆ ನೀಡಲು ಉದ್ದೇಶಿಸಿದ್ದ 5 ಕೋಟಿ ರೂಪಾಯಿಗಳ ಪೈಕಿ ಸರ್ಕಾರ ಈಗಾಗಲೇ ನಾಲ್ಕುವರೆ ಕೋಟಿ ಬಿಡುಗಡೆ ಮಾಡಿದೆ. ಜಿಲ್ಲಾ ಆಡಳಿತ ಮೂರುವರೆ ಕೋಟಿ ರೂಪಾಯಿಗಳನ್ನು ಈಗಾಗಲೇ ವಿನಿಯೋಗಿಸಿದೆ. ಉತ್ಸವಕ್ಕೆ ಯಾವದೇ ಹಣಕಾಸಿನ ಕೊರತೆಯಿಲ್ಲ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

*******

**ರಾಜ್ಯ ವಿಧಾನಸಭೆಯ** ಸಭಾಧ್ಯಕ್ಷ ಯು.ಟಿ. ಖಾದರ್ ಅವರ ನೇತೃತ್ವದ ನಿಯೋಗ ನಾರ್ವೆ ಪಾರ್ಲಿಮೆಂಟ್‌ಗೆ ನಿನ್ನೆ ಅಧಿಕೃತ ಭೇಟಿ ನೀಡಿತು. ಭೇಟಿಯ ವೇಳೆ, ನಾರ್ವೆಯ ಇತಿಹಾಸ, ಸಂವಿಧಾನ, ಆಡಳಿತ ವ್ಯವಸ್ಥೆ ಹಾಗೂ ಜನಪರ ಯೋಜನೆಗಳ ಬಗ್ಗೆ ಚರ್ಚಿಸಲಾಯಿತು. 1814 ರಲ್ಲಿ ಸ್ಥಾಪಿತವಾದ ನಾರ್ವೆ ಸಂಸತ್ತು ವಿಶ್ವದ ಅತ್ಯಂತ ಹಳೆಯ ಪ್ರಜಾಪ್ರಭುತ್ವ ಸಂಸತ್ತುಗಳಲ್ಲಿ ಒಂದು. ಅದೇ ವ ್ಷ ಅಂಗೀಕರಿಸಲಾದ ನಾರ್ವೆಯ ಸಂವಿಧಾನವು ಇಂದಿಗೂ ಶಾಶ್ವತ ಪ್ರಜಾಪ್ರಭುತ್ವದ ಮಾದರಿಯಾಗಿ ಉಳಿದಿದೆ. ನಾರ್ವೆಯ ಮಾಜಿ ಸಚಿವರಾಗಿದ್ದ ಹಿಮಾಂಶು ಗುಲೇಟ್ ಅವರನ್ನ ಭೇಟಿ ಮಾಡಿದ ಯು ಟಿ ಖಾದರ ಅವರು, ಕರ್ನಾಟಕ ಮತ್ತು ನಾರ್ವೆ ದೇಶದ ನಡುವೆ ಶಿಕ್ಷಣ, ಪ್ರವಾಸೋದ್ಯಮ ಮತ್ತು ಸಾಂಸ್ಕೃತಿಕ ಸಹಕಾರ ವೃದ್ಧಿಯ ಸಾಧ್ಯತೆಗಳ ಬಗ್ಗೆ ಚರ್ಚೆ ನಡೆಸಿದರು.

*******

**ಆಕಾಶವಾಣಿಯ ಮನ್ ಕಿ ಬಾತ್** ಕಾರ್ಯಕ್ರಮದ ಮೂಲಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಈ ತಿಂಗಳ 26 ನೇ ತಾರೀಖು, ಕೊನೆ ಭಾನುವಾರದಂದು, 11 ಗಂಟೆಗೆ, ದೇಶ, ವಿದೇಶಗಳ ಭಾರತೀಯರೊಂದಿಗೆ ತಮ್ಮ ಅನಿಸಿಕೆ ಹಂಚಿಕೊಳ್ಳಲಿದ್ದಾರೆ. ಇದು ಮನದ ಮಾತಿನ 127 ನೇ ಆವೃತ್ತಿಯಾಗಿದ್ದು, ಜನರು ಟೋಲ್-ಫ್ರೀ ಸಂಖ್ಯೆ 1800-11-7800 ಮೂಲಕ ಅಥವಾ ನಮೋ ಆ್ಯಪ್ ಅಥವಾ ಮೈ ಗೌವ್ ಓಪನ್ ಫೋರಂ ಮೂಲಕ ಆನ್‌ಲೈನ್‌ನಲ್ಲಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದು. ಮುಂಬರುವ ಸಂಚಿಕೆಗೆ ಸಲಹೆಗಳನ್ನು ಇದೇ 24 ರವರೆಗೆ ಸ್ವೀಕರಿಸಲಾಗುವುದು.

*******

**ರಾಜ್ಯದ ವಿವಿಧೆಡೆ** ನಿನ್ನೆ ಪೊಲೀಸ್ ಹುತಾತ್ಮ ದಿನ ಆಚರಿಸಿ, ಹುತಾತ್ಮ ಪೊಲೀಸರಿಗೆ ಗೌರವ ನಮನ ಸಲ್ಲಿಸಲಾಯಿತು. ಕೊಪ್ಪಳ ಜಿಲ್ಲಾ ಪೊಲೀಸ್ ವರಿ ್ಠಾಧಿಕಾರಿಗಳ ಕಚೇರಿ ಆವರಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ದೇಶದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವುದು ಮತ್ತು ಜನರಿಗೆ ಅಗತ್ಯ ರಕ್ಷಣೆ ನೀಡುವಲ್ಲಿ ಪೊಲೀಸ್ ಇಲಾಖೆ ಕೊಡುಗೆ ಅಪಾರ ಎಂದರು. **ಪೋಲಿಸರ ದಕ್ಷ ಸೇವೆಯಿಂದ ಸಮಾಜ ಶಾಂತವಾಗಿದೆ, ಅವರ ಸೇವೆ ಅತಿ** ಅಮೂಲ್ಯ ಎಂದು ಹಾಸನ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಹೇಳಿದರು. ಹಾಸನ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಆಯೋಜಿಸಿದ್ದ ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. **ಅತೀ ಒತ್ತಡ, ತುರ್ತು** ಸಂದರ್ಭದಲ್ಲಿ ಕಾರ್ಯನಿರ್ವಹಿಸುವ ಪೊಲೀಸರ ಸೇವೆ ಅತ್ಯಂತ ಮೌಲಿಕವಾದುದು ಎಂದು ಶಿವಮೊಗ್ಗ ಪ್ರಧಾನ ಜಿಲ್ಲಾ ನ್ಯಾಯಾಧೀಶ ಮಂಜುನಾಥ ನಾಯಕ್ ಹೇಳಿದರು. ಪೊಲೀಸ್ ಕವಾಯತು ಮೈದಾನದಲ್ಲಿ ಏರ್ಪಡಿಸಿದ್ದ ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಹುತಾತ್ಮ ಆರಕ್ಷಕರ ಸ್ಮಾರಕಕ್ಕೆ ಪು ್ಪನಮನ ಸಲ್ಲಿಸಿ ಅವರು ಮಾತನಾಡಿದರು. **ಸಮಾಜದ ಶಾಂತಿ,** ಸುವ್ಯವಸ್ಥೆ ಮತ್ತು ಭದ್ರತೆ ಕಾಪಾಡುವಲ್ಲಿ ಪೊಲೀಸ್ ಇಲಾಖೆಯ ಪಾತ್ರ ಮಹತ್ವದ್ದು ಎಂದು ಗದಗ ಜಿಲ್ಲಾ ನ್ಯಾಯಾಧೀಶ ಗಂಗಾಧರ್ ಸಿ.ಎಮ್. ಹೇಳಿದರು. ಕರ್ತವ್ಯ ಪಾಲನೆಯಲ್ಲಿ ಪ್ರಾಣಾರ್ಪಣೆ ಮಾಡಿದ ಪೊಲೀಸ್‌ರ ನೆನಪಿಗಾಗಿ ಜಿಲ್ಲಾ ಪೊಲೀಸ್ ಕಚೇರಿ ಆವರಣದಲ್ಲಿ ಏರ್ಪಡಿಸಿದ್ದ ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

*******

**ರಾಜ್ಯಾದ್ಯಂತ ದೀಪಾವಳಿ** ಹಬ್ಬದ ಸಂಭ್ರಮ ಮನೆಮಾಡಿದ್ದು, ಇಂದು ಬಲಿಪಾಡ್ಯಮಿಗಾಗಿ ಉತ್ಸಾಹದ ಸಿದ್ಧತೆಗಳು ನಡೆದಿವೆ. ಬಲಿಪಾಡ್ಯಮಿ ಹಬ್ಬವನ್ನು ಲಕ್ಷ್ಮೀ ಪೂಜೆಯ ನಂತರದ ದಿನವಾಗಿ ಆಚರಿಸಲಾಗುತ್ತದೆ. ಧಾರ್ಮಿಕ ನಂಬಿಕೆಯ ಪ್ರಕಾರ ಈ ದಿನ ಮಹಾಬಲಿ ಚಕ್ರವರ್ತಿ ಪಾತಾಳದಿಂದ ಭೂಮಿಗೆ ಭೇಟಿ ನೀಡುತ್ತಾರೆ ಎಂಬ ನಂಬಿಕೆಯಿದೆ. ಬಲಿಪಾಡ್ಯಮಿ ದಿನ ಬಲೀಂದ್ರ ರಾಜನನ್ನು ಆರಾಧಿಸುತ್ತೇವೆ, ದಕ್ಷಿಣ ಭಾರತದಲ್ಲಿ ದೀಪಾವಳಿಯ ಮೂರನೇ ದಿನದ ಹಬ್ಬವೇ ಬಲಿ ಪಾಡ್ಯಮಿ. ನಿನ್ನೆ ದೀಪಾವಳಿ ಅಮವಾಸ್ಯೆಯಂದು ವಿಶೇಷವಾಗಿ ವ್ಯಾಪಾರಸ್ಥರು ಅಂಗಡಿ ಮುಂಗಟ್ಟುಗಳಲ್ಲಿ ಲಕ್ಷ್ಮಿ ಪೂಜೆ ನೆರವೇರಿಸಿ, ಪಟಾಕಿ ಸಿಡಿಸಿ ಸಂಭ್ರಮಿಸಿದರು. ರಾಜ್ಯಾದ್ಯಂತ ಬೆಳಕಿನ ಹಬ್ಬ ದೀಪಾವಳಿ ಸಂಭ್ರಮ ಮನೆಮಾಡಿದ್ದು, ಮಣ್ಣಿನ ಹಣತೆಗಳ ಸಾಲು, ಆಕಾಶಬುಟ್ಟಿಯ ತೇಲು ದೀಪಗಳು, ಕಬ್ಬು, ಬಾಳೆ ಕಂದು, ತಳಿರುತೋರಣ, ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಹಬ್ಬದ ಮೆರಗನ್ನು ಹೆಚ್ಚಿಸಿವೆ.

***********

**ದೀಪಾವಳಿ ಸಂದರ್ಭದಲ್ಲಿ** ಮಾಲಿನ್ಯಕಾರಿ ಪಟಾಕಿ ಸಿಡಿಸುವುದರಿಂದ ಉಂಟಾಗುವ ಅನಾಹುತಗಳು ಹಾಗೂ ದು ್ಪರಿಣಾಮಗಳ ಬಗ್ಗೆ ಕೊಡಗು ಜಿಲ್ಲೆಯಲ್ಲಿ ಜನಜಾಗೃತಿ ಮೂಡಿಸಲಾಗುತ್ತಿದೆ. ದೀಪಾವಳಿ ಸಂದರ್ಭದಲ್ಲಿ ಮಾಲಿನ್ಯಕಾರಿ ಪಟಾಕಿಯನ್ನು ತ್ಯಜಿಸಿ ಹಸಿರು ಪಟಾಕಿಗಳನ್ನು ಮಾತ್ರ ಬಳಸುವ ಮೂಲಕ ಪರಿಸರ ಸ್ನೇಹಿ ಹಸಿರು ದೀಪಾವಳಿ ಆಚರಿಸಬೇಕು ಎಂದು ಕೊಡಗು ಜಿಲ್ಲಾ ಪರಿಸರ ಜಾಗೃತಿ ಆಂದೋಲನದ ಸಂಚಾಲಕ ಟಿ.ಜಿ.ಪ್ರೇಮಕುಮಾರ್ ಮನವಿ ಮಾಡಿದ್ದಾರೆ.

**ಧ್ವನಿ–ಟ.ಜಿ.ಪ್ರೇಮಕುಮಾರ– 37 ಸೆಕೆಂಡ್ಸ್**

***********

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

**ಪೊಲೀಸ್ ಇಲಾಖೆ ಪರಿಶ್ರಮದಿಂದ** ಅನೈತಿಕ ಪೊಲೀಸ್‌ಗಿರಿಗೆ ರಾಜ್ಯದಲ್ಲಿ ಕಡಿವಾಣ–ಮುಖ್ಯಮಂತ್ರಿ ಮೆಚ್ಚುಗೆ.

**ಸಾಮೂಹಿಕ ವಿವಾಹ:** ಮಕ್ಕಳ ರಕ್ಷಣಾ ಘಟಕದಿಂದ ನಿರಪೇಕ್ಷಣಾ ಪತ್ರ ಕಡ್ಡಾಯ– ಕಾನೂನು ಸಚಿವರು.

**ನಾಳೆಯಿಂದ ಆರಂಭವಾಗಲಿರುವ** ಮೂರು ದಿನಗಳ ಕಿತ್ತೂರು ಉತ್ಸವಕ್ಕೆ ಸಕಲ ಸಿದ್ಧತೆ–ರಾಜ್ಯ, ಹೊರ ರಾಜ್ಯಗಳು ಕಲಾವಿದರು ಭಾಗಿ.

**ರಾಜ್ಯಾದ್ಯಂತ ಪೊಲೀಸ್** ಸಂಸ್ಮರಣಾ ದಿನ ಆಚರಣೆ: ಹುತಾತ್ಮ ಪೊಲೀಸರಿಗೆ ಗೌರವ ನಮನ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

******END******